ಸಮಾಜ ಕಲ್ಯಾಣ ಇಲಾಖೆ
ಸಹಾಯಕ ನಿರ್ದೇಶಕರ ಕಛೇರಿ, (ಗ್ರೇಡ್-1) ಹಾಸನ ತಾಲ್ಲೂಕು,
ಸರ್ಕಾರಿ ಆಸ್ಪತ್ರೆ ರಸ್ತೆ, ಹಾಸನ -573201. ಹಾಸನ ಜಿಲ್ಲೆ.
ದೂರವಾಣಿ:08172-269997,ಫ್ಯಾಕ್ಸ್ : 08172232869, e.mail : tswohassan@gmail.com

ಸಂ/ಸ.ನಿ.ಸ.ಕ.ಇ/ಹಾ/ಎಸ್ಎಸ್‌ಪಿ/ಸಿಆರ್/ 2025-26 ದಿನಾಂಕ : 09/07/2024

Office of the Malnad College of Engineering * Hassan *
No. 426
Dt. 11.7.25

ಹಿರಿಯ ಸಹಾಯಕ ನಿರ್ದೇಶಕರು
ವಾರ್ತಾ ಮತ್ತು ಪ್ರಚಾರ ಇಲಾಖೆ
ಹಾಸನ.

ಮಾನ್ಯರೇ

ವಿಷಯ:- 2025-26 ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಎಸ್ಎಸ್‌ಪಿ ಪೋರ್ಟಲ್‌ನಲ್ಲಿ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಿರುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2025-26 ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ನವೀನ/ ನವೀಕರಣ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಸಮಾಜ ಕಲ್ಯಾಣ ಇಲಾಖೆಯಿಂದ ಎಸ್ಎಸ್‌ಪಿ ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅದರಂತೆ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖಾ ವೆಬ್‌ಸೈಟ್ (http://ssp.postmatric.karnataka.gov.in) ನಲ್ಲಿ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಸ್ಥಳೀಯ ಮತ್ತು ರಾಜ್ಯ ಮಟ್ಟದ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಿದೆ.

ತಮ್ಮ ವಿಶ್ವಾಸಿ,

ಸಹಾಯಕ ನಿರ್ದೇಶಕರು (ಗ್ರೇಡ್-1)
ಸಮಾಜ ಕಲ್ಯಾಣ ಇಲಾಖೆ
ಹಾಸನ ತಾಲ್ಲೂಕು, ಹಾಸನ.

Dean - SA
11/7/25

ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಹಾಸನ
**ಜಿಲ್ಲಾ ಅಧಿಕಾರಿಗಳ ಕಛೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಹಾಸನ.**
ಡಿ.ದೇವರಾಜ ಅರಸು ಭವನ, ಶ್ರೀ ವಿದ್ಯಾಗಣಪತಿ ದೇವಸ್ಥಾನದ ಅಡ್ಡರಸ್ತೆ, ಆಕಾಶವಾಣಿ ಹತ್ತಿರ, ಸಾಲಗಾಮೆ ರಸ್ತೆ, ಹಾಸನ-573202
E-mail;-**dobcmhassan@gmail.com** ☎ Fax/Phone No: **08172-295108**

ಸಂಖ್ಯೆ:ಹಿಂವಕಇ-3/ಸಿಆರ್-14/2025-26 ದಿನಾಂಕ: 05-05-2026

**ಇವರಿಗೆ,**
ಪ್ರಾಂಶುಪಾಲರು
-----------
-----------

**ಮಾನ್ಯರೆ,**

**ವಿಷಯ:** 2025-26 ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸುವ ದಿನಾಂಕ ವಿಸ್ತರಿಸುವ ಬಗ್ಗೆ.

**ಉಲ್ಲೇಖ:** ಮಾನ್ಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರ ಪತ್ರ ಸಂ:BCWD-17/41/2025-BCWD_SCHLR-BCWD ದಿನಾಂಕ:05-05-2026.

* * * * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ 2025-26ನೇ ಸಾಲಿನಲ್ಲಿ ಮೆಟ್ರಿಕ್ ನಂತರ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ, ಶುಲ್ಕ ಮರುಪಾವತಿ ಯೋಜನೆಯ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅಂತಿಮ ದಿನಾಂಕ: **16-05-2026ಕ್ಕೆ** ವಿಸ್ತರಿಸಿರುವ ಬಗ್ಗೆ ಮಾನ್ಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರು ಪ್ರಕಟಣೆ ಹೊರಡಿಸಿರುತ್ತಾರೆ. ಈ ಸಂಬಂಧ ಸಿದ್ಧಪಡಿಸಿರುವ ಪ್ರಕಟಣೆಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಸದರಿ ಪ್ರಕಟಣೆಯನ್ನು ಕಾಲೇಜುಗಳ ನಾಮಫಲಕಗಳಲ್ಲಿ ವಿದ್ಯಾರ್ಥಿಗಳ ಉಪಯೋಗಕ್ಕಾಗಿ ಪ್ರಕಟಿಸಲು ಕೋರಿದೆ.

Dean SA
Cowl
06/05/26

ತಮ್ಮ ವಿಶ್ವಾಸಿ,

ಜಿಲ್ಲಾ ಅಧಿಕಾರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಹಾಸನ ಜಿಲ್ಲೆ, ಹಾಸನ

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.

To, Scholarship section, Indira

ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0SCH1/13/2025

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ:04-08-2025

-::ಸುತ್ತೋಲೆ ::-

ವಿಷಯ : 2025-26ನೇ ಸಾಲಿಗೆ ಮೆಟ್ರಿಕ್ ನಂತರದ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಆನ್‌ಲೈನ್ ಮುಖಾಂತರ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮತ್ತು ರಕ್ಷಣಾದಳದ ಸಿಬ್ಬಂದಿಯ ಮಕ್ಕಳಿಗೆ/ಆಶ್ರಿತರಿಗೆ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ : 1. ಸರ್ಕಾರದ ಆದೇಶ ಸಂಖ್ಯೆ: ಸಕಇ 178 ಪಕವಿ 2015, ದಿ: 31-12-2015 ಮತ್ತು ದಿ: 30-06-2016.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 128 ಹೆಚ್.ಪಿ.ಟಿ.2022, ದಿ: 28-02-2023.
3.ಸರ್ಕಾರದಆದೇಶಸಂಖ್ಯೆ: ಸಕಇ 140 ಪಕವಿ 2025, ಬೆಂಗಳೂರು, ದಿ:18-02-2025

-0000000-

2025-26ನೇ ಸಾಲಿಗೆ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಡಿಪ್ಲೋಮಾ ಕೋರ್ಸುಗಳಿಗೆ ಹಾಗೂ ಕೆ.ಇ.ಎ(ಸಿ.ಇ.ಟಿ), ಮತ್ತು ಕಾಮೆಡ್-ಕೆ ಮುಖಾಂತರ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಬಿ.ಇ, ಬಿ.ಟೆಕ್, ಬಿ.ಆರ್ಕ್ ಹಾಗೂ ಪಿ.ಜಿ ಸಿ.ಇ.ಟಿ ಮುಖಾಂತರ ಎಂ.ಇ, ಎಂ.ಟೆಕ್, ಎಂ.ಆರ್ಕ್ ಕೋರ್ಸುಗಳಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದಿಂದ ರೂ.10.00 ಲಕ್ಷ ಒಳಗಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಹಾಗೂ ರಕ್ಷಣಾದಳದ ಸಿಬ್ಬಂದಿಯ ಮಕ್ಕಳು/ಆಶ್ರಿತರು ಸರ್ಕಾರಿ, ಅನುದಾನಿತ ಪಾಲಿಟೆಕ್ನಿಕ್‌ಗಳ ಡಿಪ್ಲೋಮಾ ಕೋರ್ಸುಗಳಿಗೆ ಮತ್ತು ಕೆ.ಇ.ಎ (ಸಿ.ಇ.ಟಿ) ಮುಖಾಂತರ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಬಿ.ಇ, ಬಿ.ಟೆಕ್, ಬಿ.ಆರ್ಕ್ ಕೋರ್ಸುಗಳಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮುಖಾಂತರ ಅರ್ಜಿಗಳನ್ನುರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ವೆಬ್ ಪೋರ್ಟಲ್‌ನhttps://ssp.postmatric.karnataka.gov.in/homepage.aspxರಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಮೊದಲು ವಿದ್ಯಾರ್ಥಿಗಳು ಹಾಗೂ ಸಂಸ್ಥೆಯವರು ಈ ಕೆಳಗೆ ತಿಳಿಸಿರುವಂತೆ ಕ್ರಮ ವಹಿಸುವುದು.

ಅ). ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ :-

1. ಪರಿಶಿಷ್ಟ ಜಾತಿ/ಪಂಗಡಕ್ಕೆ ಸೇರಿದ ಪಾಲಿಟೆಕ್ನಿಕ್‌ನ ವಿದ್ಯಾರ್ಥಿಗಳು ತಮ್ಮ ಎಸ್.ಎಸ್.ಪಿ ಐಡಿ (SSP ID) ಹಾಗೂ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಕೆ.ಇ.ಎ(ಸಿ.ಇ.ಟಿ)/ಕಾಮೆಡ್-ಕೆ ಯ ಪ್ರವೇಶದ ಸಂಖ್ಯೆ(C.E.Tcounseling number/Comed-k Registration number)ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಕೆ.ಇ.ಎ (ಪಿ.ಜಿ.ಸಿ.ಇ.ಟಿ)ಯ ಸಂಖ್ಯೆ(P.G C.E.Tcounseling number)ಅನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಕಡ್ಡಾಯವಾಗಿನಮೂದಿಸುವುದು.

Dean - SA

06/08/25

To, scholarship section

09/08/25

ಜಿಲ್ಲಾ ಅಧಿಕಾರಿಗಳ ಕಛೇರಿ
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ
ಹಾಸನ ಜಿಲ್ಲೆ.

ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಹಾಸನ

ಮೌಲಾನ ಆಜಾದ್ ಭವನ,
ಶ್ರೀ ವಿದ್ಯಾಗಣಪತಿ ದೇವಸ್ಥಾನದ ಅಡ್ಡ ರಸ್ತೆ,
ಆಕಾಶವಾಣಿ ಹಿಂಭಾಗ, ಸಾಲಗಾಮೆ ರಸ್ತೆ,
ಹಾಸನ-573202.
ದೂರವಾಣಿ:08172-267373
Email:-domhassan1@gmail.com

ಸಂಖ್ಯೆ:ಡಿಒಎಂ/SSP ವಿ.ವೇ/ಸಿ.ಆರ್-2/2025-26 ದಿನಾಂಕ:26-08-2025

ಇವರಿಗೆ,

ಪ್ರಾಂಶುಪಾಲರು
ಸರ್ಕಾರಿ/ಅನುದಾನಿತ/ಅನುದಾನ ರಹಿತ
ಪದವಿ ಪೂರ್ವ/ಪ್ರಥಮದರ್ಜೆ/ಐಟಿಐ/ಡಿಪ್ಲೋಮಾ/ಬಿ.ಇಎಡ್/ನರ್ಸಿಂಗ್
ಹಾಗೂ ಇಂಜಿನಿಯರಿಂಗ್/ಮೆಡಿಕಲ್/ಅಗ್ರಿಕಲ್ಚರ್ ಕಾಲೇಜುಗಳು,
ಹಾಸನ ಜಿಲ್ಲೆ.

ಮಾನ್ಯರೇ,

ವಿಷಯ:- ದಿನಾಂಕ: 29-08-2025 ರಂದು ಅಪರಾಹ್ನ: 3:30 ಗಂಟೆಗೆ ಮದೀನ ಶಾದಿಮಹಲ್, ಅಮೀರ್ ಮೊಹಲ್ಲಾ, ಹಾಸನ ಇಲ್ಲಿ ಆಯೋಜಿಸಿರುವ ಕುರಿತು.

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ: 29-08-2025 ರಂದು ಅಪರಾಹ್ನ: 3:30 ಗಂಟೆಗೆ ಮದೀನ ಶಾದಿಮಹಲ್, ಅಮೀರ್ ಮೊಹಲ್ಲಾ, ಹಾಸನ ಇಲ್ಲಿ ಅಲ್ಪಸಂಖ್ಯಾತರ ಜನಾಂಗದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಸಮುದಾಯದವರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾವತಿಯಿಂದ ಸಿಗುವ ಸೌಲಭ್ಯಗಳು, ವಿದ್ಯಾರ್ಥಿವೇತನ, ಹಾಗೂ ವಿವಿಧ ತರಬೇತಿ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮವನ್ನು ಏರ್ಪಡಿಸಲಾಗಿರುತ್ತದೆ.

ಆದ್ದರಿಂದ ತಮ್ಮ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ದಿನಾಂಕ: 29-08-2025 ರಂದು ಅಪರಾಹ್ನ: 3:30 ಗಂಟೆಗೆ ಮದೀನ ಶಾದಿಮಹಾಲ್, ಹಾಸನ ಇಲ್ಲಿಗೆ ಕಳುಹಿಸಲು ಹಾಗೂ ಅರಿವು ಕಾರ್ಯಕ್ರಮದ ಪ್ರಯೋಜನ ಪಡೆಯಲು ತಿಳಿಸಬೇಕಾಗಿ ಕೋರಿದೆ.

"ವಂದನೆಗಳೊಂದಿಗೆ"

ತಮ್ಮ ವಿಶ್ವಾಸಿ

ಜಿಲ್ಲಾ ಅಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಹಾಸನ

Dean - SA
28/8/25

D/2024-25/Scholarship/Scholarship letters

CamScanner